ರಾಜ್ಯದಲ್ಲಿರುವ ಶಿಕ್ಕಲಿಗಾರ ಜನಾಂಗವನ್ನು ಪರಿಶಿಷ್ಟ ಜಾತಿಗೆ ಸೇರಿಸುವುದು

4175 (4767) : ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕರ್ನಾಟಕದಲ್ಲಿರುವ ಶಿಕ್ಕಲಿಗಾರ ಜನಾಂಗವನ್ನು ಪರಿಶಿಷ್ಟ ಜಾತಿಗೆ ಸೇರಿಸಲಾಗಿದೆಯೇ?

ಆ) ಇಲ್ಲದಿದ್ದರೆ, ಕಾರಣವೇನು? ಈ ಸಮಾಜದ ಜನಸಂಖ್ಯೆ ಎಷ್ಟು?

ಇ) ಬೇರೆ ಬೇರೆ ರಾಜ್ಯಗಳಲ್ಲಿ ಇದೇ ಸಮಾನಾಂತರ ಹೆಸರಿನ ಜಾತಿಯನ್ನು ಪರಿಶಿಷ್ಟ ಜಾತಿಗೆ ಸೇರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಬಂದಿದ್ದರೆ, ಈ ಶಿಕ್ಕಲಿಗಾರ ಜನಾಂಗವನ್ನು ಪರಿಶಿಷ್ಟ ಜಾತಿಯ ಪಟ್ಟಿಗೆ ಯಾವಾಗ ಸೇರಿಸಲಾಗುವುದು?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು)

ಅ) ಇಲ್ಲ.

ಆ) ಈಗ ಇದು ಹಿಂದುಳಿದ ವರ್ಗಗಳ ಜಾತಿ ಪಟ್ಟಿಯ ಪ್ರವರ್ಗ-I ರಲ್ಲಿ ಕ್ರಮ ಸಂಖ್ಯೆ 48(ಸಿ) ಯಲ್ಲಿ ಸೇರಿಸಿದೆ. ವಿವಿಧ ಅಧ್ಯಯನಗಳಿಂದ ಮತ್ತು ಹಿಂದುಳಿದ ವರ್ಗಗಳ ಆಯೋಗದ ಶಿಫಾರಸ್ಸಿನ ಮೇರೆಗೆ ಹಿಂದುಳಿದ ವರ್ಗಗಳ ವರ್ಗೀಕರಣವನ್ನು ಮಾಡಲಾಗಿದೆ. ಸದ್ಯದಲ್ಲಿ ಸದರಿ ಜನಾಂಗದ ಜನಸಂಖ್ಯೆಯು ಲಭ್ಯವಿರುವುದಿಲ್ಲ.

ಇ) ಇಲ್ಲ.

ಈ) ಈ ಬಗ್ಗೆ ಕಾಲಕಾಲಕ್ಕೆ ಪ್ರಸ್ತಾವನೆಯು ಬಂದಲ್ಲಿ ಪರಿಶೀಲಿಸಲಾಗುವುದು.

ಬೆಂಗಳೂರು ನಗರದಲ್ಲಿರುವ ರೋಗಗ್ರಸ್ಥ ಸಣ್ಣ ಕೈಗಾರಿಕೆಗಳು

4176 (4589) : ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) ಮಾನ್ಯ ಸಣ್ಣ ಕೈಗಾರಿಕೆಗಳ ಹಾಗೂ ಹಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿರುವ ಒಟ್ಟು ಸಣ್ಣ ಕೈಗಾರಿಕೆಗಳೆಷ್ಟು?

ಆ) ಇವುಗಳಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರ ಸಂಖ್ಯೆ ಎಷ್ಟು?

ಇ) ಎಷ್ಟು ಸಣ್ಣ ಕೈಗಾರಿಕೆಗಳು ರೋಗಗ್ರಸ್ಥವಾಗಿವೆ;

ಈ) 2002-03ರಲ್ಲಿ ಹೊಸದಾಗಿ ಎಷ್ಟು ಸಣ್ಣ ಕೈಗಾರಿಕೆಗಳನ್ನು ಬೆಂಗಳೂರು ನಗರದಲ್ಲಿ ಪ್ರಾರಂಭಿಸಲಾಗಿದೆ?

ಉ) ರೋಗಗ್ರಸ್ಥ ಸಣ್ಣ ಕೈಗಾರಿಕೆಗಳನ್ನು ಪುನಃಶ್ಚೇತನಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಆರ್. ರೋಷನ್‌ಬೇಗ್ (ಸಣ್ಣ ಕೈಗಾರಿಕೆಗಳ ಹಾಗೂ ಹಜ್ ಸಚಿವರು)

ಅ) ದಿನಾಂಕ: 30.6.2003ರಲ್ಲಿದ್ದಂತೆ ನೋಂದಾಯಿತ ಸಣ್ಣ ಕೈಗಾರಿಕೆಗಳ ಒಟ್ಟು ಸಂಖ್ಯೆ: 31,635

ಆ) 2,54,591

ಇ) 71